## ಒಂದನೇ ಅಪರ  ಸಿವಿಲ್ ನ್ಯಾಯಾಧೀಶರು ಮತ್ತು  ಪ್ರದನ್ಯಾದಂ ರವರ ನ್ಯಾಯಾಲಯ, ಕೊಳ್ಳೇಗಾಲ

## ಸಿ ಸಿ  ಸಂಖ್ಯೆ  742/2018

ಚಾಸಾ 2   ಪ್ರಾಸಾ  1

| | | |
|---|---|---|
| ಸಾಕ್ಷಿಯ ಹೆಸರು | : | ಕೃಷ್ಣ |
| ತಂದೆಯ  ಹೆಸರು | : | ಹನುಮಂತಯ್ಯ |
| ವಯಸ್ಸು | : | 56 ವರ್ಷ |
| ಉದ್ಯೋಗ | : | ಕೂಲಿ |
| ವಾಸ ಸ್ಥಳ | : | ಕಲ್ಲಹಳ್ಳಿ ಗ್ರಾಮ, ಗುಂಡ್ಲುಪೇಟೆ ತಾಲ್ಲೂಕ |

ದಿನಾಂಕ 19.02.2026 ರಂದು ಸಾಕ್ಷಿದಾರರನ್ನು  ಕರೆಸಿ  ಪ್ರಮಾಣ ವಚನ ಬೋಧಿಸಲಾಯಿತು.

### ಮುಖ್ಯ  ವಿಚಾರಣೆಃ –  ಮಾನ್ಯ ಸಸಅ ರವರಿಂದ

ಚಾಸಾ–1, 3 ಮತ್ತು 4 ರವರು ಪರಿಚಯ ಇರುವುದಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಸದರಿ ದಾಖಲೆ ಸ್ಥಳ ಮಹಜರ್ ಆಗಿದ್ದು, ಅದನ್ನು ನಿಪಿ–1 ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ–1 ರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–1(ಎ) ಎಂದು ಗುರುತಿಸಲಾಯಿತು. ನಾನು ನಿಪಿ–1 ಕ್ಕೆ ಸುಮಾರು 5 ವರ್ಷಗಳ ಹಿಂದೆ  ರಾಮಾಪುರ ಬಸ್ ನಿಲ್ದಾಣದಲ್ಲಿ ಸಹಿ ಮಾಡಿರುತ್ತೇನೆ. ನಿಪಿ–1 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.  ಪ್ರಕರಣ ಸಂಬಂಧ ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.  ಈ ಪ್ರಕರಣದ ವಿದ್ಯಾಮಾನ ನನಗೆ ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಈ ಸಾಕ್ಷಿಯನ್ನು  ಪ್ರತಿಕೂಲ ಸಾಕ್ಷಿಯಾದ ಕಾರಣ ಸಹಾಯಕ ಸರ್ಕಾರಿ ಅಭಿಯೋಜಕರು  ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು ಕಾಲಾವಕಾಶ ನೀಡಲಾಗಿದೆ)**

### ಪಾಟೀ ಸವಾಲು :  ಮಾನ್ಯ ಸ.ಸ.ಅ ರವರಿಂದ

ದಿನಾಂಕ 04.05.2018 ರಂದು ರಾತ್ರಿ 8.30 ಗಂಟೆ ಸಮಯದಲ್ಲಿ ನಾನು ಹನೂರು ಪಟ್ಟಣದ ಮ.ಮ. ಬೆಟ್ಟದ ರಸ್ತೆಯ ಎ.ಪಿ.ಎಂ.ಸಿ. ಚೆಕ್ ಪೋಸ್ಟ್ ಬಳಿ ನಿಂತಿರುತ್ತೇನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ–1 ರವರು ನನಗೆ ಆರೋಪಿ ತನ್ನ ದ್ವಿಚಕ್ರ ವಾಹನವಾದ ಕೆಎ–10–ಕೆ–6634 ವಾಹನದ ಹಿಂದಿನ

ಸೀಟ್ ನ ಒಂದು ಬಿಳಿ ಬಣ್ಣದ ಪ್ಲಾಸ್ಟಿಕ್ ಚೀಲವನ್ನು ಇಟ್ಟುಕೊಂಡು ರಾತ್ರಿ ಸಮಯದಲ್ಲಿ ಸಾಗಾಣಿಕೆ ಮಾಡುತ್ತಿದ್ದಾನೆ ಎಂದು ತಿಳಿಸಿ ನನ್ನನ್ನು ಪಂಚರಾಗಲು ಕೋರಿಕೊಂಡರು ಎಂದರೆ ಸರಿಯಲ್ಲ. ಅದಕ್ಕೆ ನಾನು ಒಪ್ಪಿದ ಮೇರೆಗೆ ಚಾಸಾ–1 ರವರು ನ್ಯಾಯಾಲಯದಿಂದ ಶೋಧನಾ ವಾರೆಂಟ್ ಪಡೆಯಲು ಕಾಲ ವಿಳಂಬವಾಗಿದ್ದು, ಆರೋಪಿ ಮುದ್ದೆಮಾಲು ಸಮೇತ ತಪ್ಪಿಸಿಕೊಳ್ಳಬಹುದು ಎಂದು ತಿಳಿದು ತನ್ನ ಪ್ರದತ್ತ ಅಧಿಕಾರವನ್ನು ಚಲಾಯಿಸಿ ಸ್ಥಳದಲ್ಲಿ ಶೋಧನಾ ವರದಿ ತಯಾರಿಸಿ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆಗ ನಾನು ಚಾಸಾ–1, 3 ಮತ್ತು 4 ರವರು ಹನೂರು ಪಟ್ಟಣದ ಜಿ.ವಿ. ಗೌಡ ಪದವಿ ಪೂರ್ವ ಕಾಲೇಜು ಎದುರಿನ ರಸ್ತೆಗೆ ಬಂದು ನಿಂತಿದ್ದೆವು ಎಂದರೆ ಸರಿಯಲ್ಲ. ಆಗ ಸುಮಾರು 9.30 ಗಂಟೆ ಸಮಯದಲ್ಲಿ ಆರೋಪಿ ಹನೂರು ಪಟ್ಟಣದಿಂದ ಬಂಡಳ್ಳಿ ಮಾರ್ಗವಾಗಿ ಬರುತ್ತಿದ್ದು ನಮ್ಮನ್ನು ನೋಡಿ ಸ್ಥಳದಲ್ಲಿ 20 ಮೀಟರ್ ಅಂತರದಲ್ಲಿ ವಾಹನವನ್ನು ನಿಲ್ಲಿಸಿದನು ಎಂದರೆ ಸರಿಯಲ್ಲ. ನಂತರ ಆರೋಪಿಯು ತನ್ನ ವಾಹನದ ಹಿಂದೆ ಬಿಳಿ ಬಣ್ಣದ ಪ್ಲಾಸ್ಟಿಕ್ ಚೀಲವನ್ನು ಕಟ್ಟಿರುವುದು ಟಾರ್ಚ್ ಬೆಳಕಿನಿಂದ ತಿಳಿಯಿತು ಎಂದರೆ ಸರಿಯಲ್ಲ. ನಂತರ ನಾನು, ಚಾಸಾ–1, 3 ಮತ್ತು 4 ರವರು ವಾಹನದ ಸಮೀಪ ಹೋಗುತ್ತಿದ್ದಂತೆ ಆರೋಪಿ ಪರಾರಿಯಾಗಲು ಪ್ರಯತ್ನಿಸಿದನು ಎಂದರೆ ಸರಿಯಲ್ಲ. ಆಗ ಆರೋಪಿ ಮತ್ತು ವಾಹನವನ್ನು ಹಿಡಿದು ಪರಿಶೀಲಿಸಲಾಗಿ ವಾಹನದ ಸಂಖ್ಯೆಯು ಕೆಎ–10–ಕೆ–6634 ವಾಹನವಾಗಿದ್ದು ಸದರಿ ವಾಹನವು ಹೀರೋಹೊಂಡಾ ಸ್ಪ್ಲೆಂಡರ್ ಪ್ಲಸ್ ಆಗಿರುವುದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ. ನಂತರ ಆರೋಪಿಯನ್ನು ವಿಚಾರಣೆ ಮಾಡಲಾಗಿ ನನ್ನ ಹೆಸರು ರಾಚಯ್ಯ ಬಿನ್ ಪುಟ್ಟಯ್ಯ ಎಂದು ತಿಳಿಸಿದನು ಎಂದರೆ ಸರಿಯಲ್ಲ. ನಂತರ ಆರೋಪಿ ವಾಹನದ ಹಿಂದಿನ ಸೀಟ್ ನಲ್ಲಿ ಕಟ್ಟಿರುವ ಬಿಳಿ ಬಣ್ಣದ ಚೀಲದಲ್ಲಿ ಏನಿದೆ ಎಂದು ಕೇಳಲಾಗಿ ಆತನು ಯಾವುದೇ ಉತ್ತರ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಂತರ ನನ್ನ, ಚಾಸಾ–3 ಮತ್ತು 4 ರವರ ಸಮಕ್ಷಮ ಬಿಳಿ ಚೀಲವನ್ನು ತೆರೆದು ನೋಡಲಾಗಿ ಮದ್ಯ ತುಂಬಿರುವುದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ. ಸದರಿ ಮದ್ಯ 90 ಎಂ ಎಲ್ ನ ಹೈವಾರ್ಡ್ಸ್ ಚಿಯರ್ಸ್ ವಿಸ್ಕಿಯ ಮದ್ಯದ ಟೆಟ್ರಾ ಪ್ಯಾಕ್ ಗಳು ಆಗಿದ್ದವು ಎಂದರೆ ಸರಿಯಲ್ಲ. ನಂತರ ಆರೋಪಿ ಸದರಿ ಟೆಟ್ರಾ ಪ್ಯಾಕ್ ಗಳನ್ನು ಹನೂರು ಪಟ್ಟಣದ ಅಂಗಡಿಗಳಿಂದ ಖರೀದಿಸಿ ಭೈರನತ್ತ ಗ್ರಾಮದಲ್ಲಿ ಮಾರಾಟ ಮಾಡುವುದಾಗಿ ತಿಳಿಸಿದನು ಎಂದರೆ ಸರಿಯಲ್ಲ. ಚಾಸಾ–1 ರವರು ಈ ರೀತಿ ಮದ್ಯವನ್ನು ಸಾಗಾಣಿಕೆ ಮಾಡಲು ನಿನ್ನ ಬಳಿ ಯಾವುದಾದರೂ ಪರವಾನಿಗೆ ಇದೆಯೇ ಎಂದು ವಿಚಾರಿಸಿದಾಗ ಆರೋಪಿ ಯಾವುದೇ ಪರವಾನಿಗೆ ಇಲ್ಲ ಎಂದು ತಿಳಿಸಿರುತ್ತಾನೆ ಎಂದರೆ ಸರಿಯಲ್ಲ. ನಂತರ ನಮ್ಮ ಸಮಕ್ಷಮ 90 ಎಂ ಎಲ್ ನ ಹೈವಾರ್ಡ್ಸ್ ಚಿಯರ್ಸ್ ವಿಸ್ಕಿಯ 144 ಟೆಟ್ರಾ ಪ್ಯಾಕ್ ಗಳ ಪೈಕಿ 26 ಟೆಟ್ರಾ ಪ್ಯಾಕ್ ಗಳನ್ನು ರಾಸಾಯನಿಕ ಪರೀಕ್ಷೆಗಾಗಿ ಸ್ಯಾಂಪಲ್ ತೆಗೆದು ಒಂದು ಬಿಳಿ ಬಟ್ಟೆ ಚೀಲಕ್ಕೆ ಹಾಕಿ ದಾರದಿಂದ ಹೊಲಿದು ಕಚೇರಿ ಮುದ್ರ ಸಂಖ್ಯೆ 273 ಸೀಲ್ ಮಾಡಿ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ–1 ರಂತೆ ಸ್ಥಳ ಮಹಜರ್ ನ್ನು ರಾತ್ರಿ 9.30 ಗಂಟೆಯಿಂದ

10.45 ಗಂಟೆಯವರೆಗೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಮತ್ತು ಸ್ಥಳದಲ್ಲಿ ನನ್ನ ಹಾಗೂ ಚಾಸಾ-3 ರವರ ಸಹಿಯನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 04.05.2018 ರಂದು ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಯಲ್ಲಿ "ದಿನಾಂಕ 04.05.2018ರಂದು ರಾತ್ರಿ 8.30 -------------------------------------------------------

-----------------------------------------------------ಮತ್ತೆ ನೋಡಿದರೆ ಗುರುತಿಸುತ್ತೇನೆ." ಸಾಕ್ಷಿಯು ಅಲ್ಲಗಳೆದಿರುವ ಹೇಳಿಕೆಯ ಭಾಗವನ್ನು ನಿಪಿ-2 ಎಂದು ಗುರುತಿಸಲಾಯಿತು. ನಿಪಿ-1 ಮತ್ತು 2 ರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ನನಗೆ ತಿಳಿದಿದ್ದರು ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ,

(ಎಂ. ರಂಜಿತ್ ಕುಮಾರ್)
ಒಂದನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಕೊಳ್ಳೇಗಾಲ.